[redacted]



# ಕೊಗನೊಳಿ ಚೆಕ ಪೋಸ್ಟಗೆ ಭೇಟಿ ನೀಡಿ ಪರಿಶೀಲಿಸಿದ ಚುನಾವಣಾ ವೀಕ್ಷಕರು



ಚಿಕ್ಕೋಡಿ(ಎ) 01-ಚಿಕ್ಕೋಡಿ ಲೋಕಸಭಾ ಕ್ಷೇತ್ರಕ್ಕೆ ಚುನಾವಣಾ ಆಯೋಗವು ನಿಯೋಜಿಸಿರುವ ಸಾಮಾನ್ಯ ವೀಕ್ಷಕರಾದ ಜಿ.ಎಸ್.ಪಾಂಡಾ ದಾಸ್ ಅವರು ಶನಿವಾರ (ಎ.20) ರಂದು ಕೊಗನೊಳಿ ಚೆಕನಪೋಸ್ಟಗೆ ಅನೀರಿಕ್ಷಿತವಾಗಿ ಭೇಟಿ ನೀಡಿ ಪರಿಶೀಲಿಸಿದರು. ಚೆಕಪೋಸ್ಟನಲ್ಲಿ ಕಾರ್ಯನಿರ್ವ ಹಿಸುತ್ತಿರುವ ಅಧಿಕಾರಿ ಸಿಬ್ಬಂದಿಗಳ ಮಾಹಿತಿ ಪಡೆದ ಅವರು ಚುನಾವಣಾ ಅಕ್ರಮಗಳನ್ನು ತಡೆಗಟ್ಟುವಲ್ಲಿ ಚೆಕ್ ಪೋಸ್ಟಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳ ಜವಾಬ್ದಾರಿ ಅತೀ ಪ್ರಮುಖವಾ ಗಿರುತ್ತದೆ. ಚೆಕ್ ಪೋಸ್ಟಗಳಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳು ಅತೀ ಜಾಗರೂಕ ತೆಯಿಂದ ಕಾರ್ಯನಿರ್ವಹಿಸ ಬೇಕು. ತಮ್ಮ ಕಾರ್ಯದಲ್ಲಿ ಉದಾಸೀನತೆ, ಅಜಾಗರೂಕತೆ ತೋರದಂತೆಚುನಾವಣಾ ವೀಕ್ಷಕರಾದ ಜಿ.ಎಸ್.ಪಾಂಡಾ ದಾಸ್ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು

# ಮದ್ಯ ಪ್ರಿಯರ ತಾಣವಾದ ಡಿಸಿ ಕಚೇರಿ ಪಕ್ಕದ ಉದ್ಯಾನ



ಬೆಳಗಾವಿ: ಜಿಲ್ಲಾಧಿಕಾರಿಗಳು ಕಛೇರಿ ಆವರಣದ ಪಕ್ಕದಲ್ಲಿರುವ ಉದ್ಯಾನವನ ಮದ್ಯ ಪ್ರಿಯರು ದಿನ ನಿತ್ಯ ಮದ್ಯಪಾನ ಮಾಡಿ, ಹೆಂಡದ ಬಾಟಲಿ ಎಲ್ಲಿಂದರಲ್ಲಿ, ಬಿಸಾಕಿ ಅದರ ಗಾಜುಗಳು ಜನ ಸಾಮಾನ್ಯರಿಗೆ ತಗ್ಗಲುವಂತಾಗಿದೆ. ಇದ್ದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಇಂತಹ ಕೃತ್ಯವೆಸಗಿರುವ ಮೇಲೆ ಮಾನ್ಯ ಜಿಲ್ಲಾಧಿಕಾರಿಗಳು, ಹಾಗೂ ಮಹಾನಗರ ಪಾಲಿಕೆ, ಮತ್ತು ಪೋಲಿಸ್ ಕಮಿಷನರ್ ರವರು ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಹಾಗೂ ಇಂತಹ ಉದ್ಯಾನವನು ಮರು ಶುಚಿತ್ವಗೋಳಿಸಿ. ಸಾರ್ವಜನಿಕರ ಸಹಾಯ ಮಾಡಬೇಕೆಂದು ಯುವ ಕರ್ನಾಟಕ ಭೀಮ್ ಸೇನೆ ಯುವ ಶಕ್ತಿ ಸಂಘಟನೆ ಸಂಸ್ಥಾಪಕ ರಾಜ್ಯಾಧ್ಯಕ್ಷರು. ಶ್ರೀ ಪ್ರವೀಣ್ ಆರ್ ಮಾದರ್ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಯುವ ಕರ್ನಾಟಕ ಭೀಮ್ ಸೇನೆ ಯುವ ಶಕ್ತಿ ಸಂಘದ ರಾಜ್ಯ ಉಪಾಧ್ಯಕ್ಷರು ಅಕ್ಷಯ ಕೆ ಆರ್, ಬೆಳಗಾವಿ ಜಿಲ್ಲಾ ಅಧ್ಯಕ್ಷ ಉದಯ ಬಸೋಜಿ, ರಾಜ್ಯ ಕಾನೂನು ಘಟಕದ ಅಧ್ಯಕ್ಷ ಎ ಚ್ ಗಂಗಾಯಿ ಉಪಸ್ಥಿತರಿದ್ದರು.

# ಉಚಿತ ಆರೋಗ್ಯ ತಪಾಸನಾ ಶಿಬಿರ



ಬೆಳಗಾವಿ: ಸಾರ್ವಜನಕರ ಆರೋಗ್ಯ ಸೇವೆಗೆ ಕೆ ಎಲ್ ಇ ಸಂಸ್ಥೆ ಯಾವತ್ತೂ ಸಿದ್ದ ಎಂದು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಜನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ. ಶ್ರೀನವಾಸ ಬಿ ಅವರು ಮಾತನಾಡುತ್ತಿದ್ದರು. ಅವರು ಶನವಾರ 20ನೇ ಏಪ್ರಿಲ್ 2024 ರಂದು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆ ಹಾಗೂ ಗುಂಜಿ ಗ್ರಾಮದ ಸಂಕಲ್ಪ ಫೌಂಡೇಶನ್ ನ ಸಂಯುಕ್ತಾಶ್ರಯದಲ್ಲಿ ನಡೆದ ಉಚಿತ ಆರೋಗ್ಯ ತಪಾಸನಾ ಶಿಬಿರವನ್ನು ಉದ್ಘಾಟಿಸುತ್ತ ಮಾತನಾಡುತ್ತಿದ್ದರು. ಆರೋಗ್ಯ ಸೇವೆಗಳು ಕೇವಲ ನಗರಗಳಿಗಷ್ಟೇ ಸೀಮಿತವಾಗಬಾರದು ಪ್ರತಿಯೊಂದುಗ್ರಾಮಕ್ಕೂ ಪ್ರತಿಯೊಂದು ಮನೆಗೂ ಮುಟ್ಟಬೇಕು ಎಂಬ ಮಹದುದ್ದೇಶದಿಂದ ಕೆ ಎಲ್ ಇ ಸಂಸ್ಥೆಯು ಈಗಾಗಲೆ ಕಾರ್ಯೋನ್ಮುಖವಾಗಿದೆ. ಈ ನಿಟ್ಟಿನಲ್ಲಿ ಗುಂಜಿ ಗ್ರಾಮದಲ್ಲಿಯೂ ಸಹ ಇಂದು ಉಚಿತ ಆರೋಗ್ಯ ತಪಾಸನಾ ಶಿಬಿರವನ್ನು ಹಮ್ಮಿಕೊಳ್ಳಲಾಗುತ್ತಿದೆ ಆದ್ದರಿಂದ ಈ ಶಿಬಿರದ ಸದುಪಯೋಗ ಪಡೆದುಕೊಂಡು ಆರೋಗ್ಯವಂತರಾಗಿರಿ ಎಂದು ಕರೆ ನೀಡಿದರು.ಕಾರ್ಯಕ್ರಮದ ಅಂಗವಾಗಿ ಮಾತನಾಡಿದ ಸಂಕಲ್ಪ ಫೌಂಡೇಷನ್ ನ ಅಧ್ಯಕ್ಷ ಶ್ರೀ ರಾಜು ಬರಗುರಕರ ಕರ್ನಾಟಕ ರಾಜ್ಯದ ಗಡಿ ಭಾಗಗಳಿಗೆ ಹೊಂದಿಕೊಂಡಿರುವ ನಮ್ಮ ಗ್ರಾಮಗಳು ಸರಿಯಾದ ಆರೋಗ್ಯ ಸೇವೆಗಳಿಂದ ದೂರವಾಗಿವೆ. ಆದರೆ ಕೆ ಎಲ್ ಇ ಸಂಸ್ಥೆಯಂತಹ ಉನ್ನತ ವಿಚಾರಗಳನ್ನು ಹೊಂದಿರುವ ಶಕ್ತಿಗಳು ನಮ್ಮ ಬಾಗದ ಗ್ರಾಮಗಳಿಗೆ ಆರೋಗ್ಯ ಸೇವೆಗಗಳನ್ನು ಒದಗಿಸುತ್ತಿರುವದು ಅಭಿನಂದನಾರ್ಹವಾಗಿದೆ. ಈ ನಿಟ್ಟಿನಲ್ಲಿ ಕೆ ಎಲ್ ಇ ಸಂಸ್ಥೆಯ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಜೊತೆಗೂಡಿ ನಮ್ಮ ಈ ಭಾಗದ ಜನರಿಗೆ ಆರೋಗ್ಯ ಸೇವೆ ಸಿಗುವಂತೆ ಮಾಡಲು ನಮ್ಮ ಸಂಸ್ಥೆ ಸದಾ ಸಿದ್ದವಾಗಿರುತ್ತದೆ ಎಂದು ಮಾತನಾಡುತ್ತಿದ್ದರು.

ಶಿಬಿರದಲ್ಲಿ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಜನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ. ಶ್ರೀನವಾಸ ಬಿ ಅವರು, ಚಿಕ್ಕಮಕ್ಕಳ ವೈದ್ಯರಾದ ಡಾ. ಸಂತೋಷಕುಮಾರ ಕರಮಸಿ, ಎಲುಬು ಕೀಲು ವೈದ್ಯ ಡಾ.ಆನಂದಕುಮಾರ ಖಟವಿ ಹಾಗೂ ವೈದ್ಯಾಧಿಕಾರಿ ಡಾ. ಕಡೋಲ್ಕರ, ಡಾ. ಕೆನ್ನ ಅರುಲ್ ಮತ್ತು ತಂಡದವರು ಗುಂಜಿ ಗ್ರಾಮದ ಗ್ರಾಮಸ್ಥರಿಗೆ ಆರೋಗ್ಯ ತಪಾಸಣೆ ಮಾಡಿ ಔಷಧ ವಿತರಿಸಿದರು.

ಶಿಬಿರದಲ್ಲಿ 273 ನಾಗರಿಕರನ್ನು ತಪಾಶಿಸಲಾಯಿತು.ಅದರಲ್ಲಿ 110 ಜನರಿಗೆ ಮೆಡಿಸಿನ ವಿಭಾಗದ ವೈದ್ಯರು ತಪಾಸಣೆ ಮಾಡಿ 15 ಜನರಿಗೆ ಅತಿರಕ್ತದೊತ್ತಡ, 8 ಜನರಿಗೆ ಮಧುಮೇಹದ ಸಮಸ್ಯೆ, 65 ಜನರಿಗೆ ಎಲುಬು ಕೀಲು ವೈದ್ಯರಿಂದ ತಪಾಸಣೆ ಮಾಡಲಾಗಿ ಅದರಲ್ಲಿ 12 ಜನರಿಗೆ ಸಂಧಿವಾತ ಮತ್ತಿತರೆ ಸಮಸ್ಯೆಗಳಿರುವದು ತಿಳಿದುಬಂದಿತು, 65 ಜನರಿಗೆಕಣ್ಣಿನ ವೈದ್ಯರು ತಪಾಸಣೆ ಮಾಡಲಾಗಿಅದರಲ್ಲಿ 26 ಜನರಿಗೆ ಮೋತಿಬಿಂದು ಮತ್ತಿತರೆ ಸಮಸ್ಯೆಗಳಿರುವದು ತಿಳಿದುಬಂದಿತು, ಚಿಕ್ಕಮಕ್ಕಳ ವೈದ್ಯರು 45 ಮಕ್ಕಳನ್ನು ತಪಾಸಣೆ ಮಾಡಿದರು. ಅದರಲ್ಲಿ 4 ಮಕ್ಕಳಿಗೆ ಅಪೌಷ್ಟಿಕತೆ ಮತ್ತಿತರೆ ಸಮಸ್ಯೆಗಳಿರುವದು ತಿಳಿದುಬಂದಿತು. ಈ ಎಲ್ಲ ನಾಗರಿಕರಿಗೆ ಆಸ್ಪತ್ರೆಯ ಅತ್ಯಲ್ಪದರದ ಸೇವೆಗಳನ್ನು ಉಪಯೋಗಿಸಿಕೊಳ್ಳಲು ಆಸ್ಪತ್ರೆಯ ನಿರ್ದೇಶಕರಾದ ಡಾ.ಎಸ್ ಸಿ ಧಾರವಾಡ ಅವರು ಸೂಚಿಸಿದ್ದಾರೆ.

# ಪೋಟೋಗ್ರಾಫಿ-ವಿಡಿಯೋಗ್ರಾಫಿಯ ಉಚಿತ ತರಬೇತಿ

ಬೆಳಗಾವಿ.ಏ-: ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯು ಮೇ ಮತ್ತು ಜೂನ ತಿಂಗಳಿನಲ್ಲಿ ಪ್ರಾರಂಬವಾಗುವ ಜೆಸಿಬಿ ಅಪರೇಟರ್, ಪೋಟೋಗ್ರಾಫಿ, ವಿಡಿಯೋಗ್ರಾಫಿ, ಹಾಗೂ ಲಘು ಮೋಟರ್ ವಾಹನ ಚಾಲನಾ ತರಬೇತಿಗೆ ಗ್ರಾಮೀಣ ಭಾಗದ ನಿರುದ್ಯೋಗ ಯುವಕ ಯುವತಿಯರಿಗೆ ಉಚಿತ ತರಬೇತಿ ನೀಡಲಾಗುತ್ತದೆ.

ತರಬೇತಿ ಪಡೆಯುುವವರು 18 ರಿಂದ 45 ವಯಸ್ಸಿನವರಾಗಿರಬೇಕು. ಇದು ಊಟ ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿದೆ. ಗ್ರಾಮೀಣ ವಿಭಾಗದ ನೀರುದ್ಯೋಗಿಗಳುಗೆ ಮೊದಲ ಆದ್ಯತೆ ನೀಡಲಾಗುವುದು.

ಆಸಕ್ತರು ಏ.30 ಒಳಗಾಗಿ ತಮ್ಮ ಹೆಸರು, ವಿಳಾಸಗಳನ್ನು ನೊಂದಾಯಿಸಿಕೊಳ್ಳಬಹುದು ಎಂದು ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯ ನಿರ್ದೇಶಕರಾದ ಪ್ರಶಾಂತ ಬಡ್ಡಿ ಅವರು ಪ್ರಕರಣದಲ್ಲಿ ತಿಳಿಸಿದ್ದಾರೆ.

## ಉಚಿತ ಕೌಶಲ್ಯಾಧಾರಿತ ತರಬೇತಿಗೆ ಅರ್ಜಿ ಆಹ್ವಾನ

ಕೊಪ್ಪಳ ಏಪ್ರಿಲ್: ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯಿಂದ ಉಚಿತ ಕೌಶಲ್ಯಾಧಾರಿತ ತರಬೇತಿಗಾಗಿ ಅರ್ಜಿ ಆಹ್ವಾನಸಲಾಗಿದೆ.

18 ರಿಂದ 45 ವಯೋಮಾನದ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ, ಯುವತಿಯರಿಗಾಗಿ ಮೇ ಮತ್ತು ಜೂನ್ ತಿಂಗಳಲ್ಲಿ ಜೆಸಿಬಿ ಅಪರೇಟರ್, ಫೋಟೋಗ್ರಾಫಿ, ವಿಡಿಯೋಗ್ರಾಫಿ ಹಾಗೂ ಲಘು ಮೋಟರ್ ವಾಹನ ಚಾಲನಾ ತರಬೇತಿಗಳನ್ನು ನೀಡಲಾಗುತ್ತಿದ್ದು, ತರಬೇತಿ ಅವಧಿಯಲ್ಲಿ ಊಟ ಹಾಗೂ ವಸತಿಯು ಉಚಿತವಾಗಿರುತ್ತದೆ.

ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸಗಳನ್ನು ನೋಂದಾಯಿಸಲು ಏಪ್ರಿಲ್ 30 ಕೊನೆಯ ದಿನವಾಗಿದ್ದು, ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುವುದು. ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿಂಗ್ ನಿಂದ ಸಾಲ ಪಡೆದು ಸ್ವ-ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನಿತರ ಮಾಹಿತಿಯನ್ನು ಉಚಿತವಾಗಿ ನೀಡಲಾಗುವುದು.

ತರಬೇತಿಯಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ, ದೂ.ಸಂ : 8217236973, 9483485489, 9482555316 ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

# ಅನಾಮಧೇಯ ಮೃತ ದೇಹ: ವಾರಸುದಾರರ ಪತ್ತೆಗೆ ಮನವಿ



ಹೊಸಪೇಟೆ (ವಿಜಯನಗರ) ಏ-): ಗಾಳೆಮ್ಮಗುಡಿ ಗ್ರಾಮದ ಡಾ.ದುರುಗಣ್ಣ ಜಮೀನಿನ ಹತ್ತಿರ ಹೆಚ್‌ಎಲ್‌ಸಿ ಕಾಲುವೆಯ ನೀರಿನಲ್ಲಿ ಏಪ್ರೀಲ್ 6ರಂದು ಅಪರಿಚಿತ ಅನಾಮಧೇಯ ಗಂಡಸಿನ ಶವವು ಪತ್ತೆಯಾದ ಬಗ್ಗೆ ಹಂಪಿ ಪ್ರವಾಸಿ ಪೊಲೀಸ್ ಠಾಣೆಯ ಯು.ಡಿ.ಆರ್ ನಂಬರ್ 07/2024 ಕಲಂ 174 (2) ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

45-50 ವರ್ಷ ವಯಸ್ಸಿನ ಗಂಡಸು ವ್ಯಕ್ತಿಯು 5.5 ಅಡಿ ಎತ್ತರವಿದ್ದು ಚರ್ಮ ಕೊಳೆಯುವ ಸ್ಥಿತಿಯಲ್ಲಿದೆ. ಮೈಮೇಲೆ ತಿಳಿನೀಲಿ ಗೆರೆವುಳ್ಳ ಕಂದು ಬಣ್ಣದ ರೆಡಿಮೇಡ್ ಶರ್ಟ್, ನೀಲಿ ಬಣ್ಣದ ಪ್ಯಾಂಟ್ ಸೊಂಟದಲ್ಲಿ ಉಡುದಾರಕ್ಕೆ ಒಂದು ತಾಯತ ಕಟ್ಟಿದ್ದು ಎರಡು ಕಣ್ಣುಗಳು ಮುಚ್ಚಿರುತ್ತವೆ. ಅಲ್ಲಲ್ಲಿ ಜಲ ಚರಗಳು ತಿಂದಂತೆ ಕಂಡು ಬರುತ್ತದೆ. ಮೂಗು ಮತ್ತು ಬಲ ಕಿವಿಯ ಮೇಲೆ ರಕ್ತವು ಹರಿದಿರುತ್ತದೆ.

ಈ ಮೃತ ವ್ಯಕ್ತಿಯ ಬಗ್ಗೆ ಗುರುತು ಹಾಗೂ ವಾರಸುದಾರರ ವಿಳಾಸ ಪತ್ತೆಯಾದಲ್ಲಿ ವಿಜಯನಗರ ಜಿಲ್ಲೆ ಹೊಸಪೇಟೆ ಕಂಟ್ರೋಲ್ ರೂಂ ಮೊ:8480805700, ಹೊಸಪೇಟೆ ಡಿಎಸ್ಪಿ ಕಚೇರಿ ದೂರವಾಣಿ:08394-24204., ಹಂಪಿ ಸಿಪಿಐ ಕಚೇರಿ ದೂ:08394-241530, ಹಂಪಿ ಪ್ರವಾಸಿ ಠಾಣೆ ಸಿಪಿಐ ದೂ.ಸಂಖ್ಯೆ:9480805758 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಕುಡಿಯುವ ನೀರು ಪೂರೈಕೆ ಸಮಸ್ಯೆ ಆಗದಂತೆ ಎಚ್ಚರ ವಹಿಸಿ: ಜಿಲ್ಲಾಧಿಕಾರಿ ವೈಶಾಲಿ



ಗದಗಏಪ್ರಿಲ್:- ಮುಂಗಾರು ಆರಂಭ ಆಗುವವರೆಗೆ ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಗಮನಹರಿಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಸೂಚಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಅವರ ಕಚೇರಿ ಸಭಾಂಗಣದಲ್ಲಿ ಬರ ನಿರ್ವಹಣೆ ಹಾಗೂ ಮುಂಗಾರು ಪೂರ್ವ ಹಂಗಾಮಿನಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಸೋಮವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಮತ್ತು ಪಟ್ಟಣ ಪ್ರದೇಶ ಸೇರಿದಂತೆ ಯಾವ ಕಡೆಯೂ ಸಹ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗದಂತೆ ಎಚ್ಚರ ವಹಿಸಬೇಕು ಎಂದು ಜಿಲ್ಲಾಧಿಕಾರಿ ಅವರು ನಿರ್ದೇಶನ ನೀಡಿದರು. ಗದಗ, ರೋಣ, ಗಜೇಂದ್ರಗಡ, ಮುಂಡರಗಿ, ಶಿರಹಟ್ಟಿ, ನರಗುಂದ, ಲಕ್ಷ್ಮೇಶ್ವರ ತಾಲೂಕು ಕೇಂದ್ರಗಳು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಪೂರೈಕೆ ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ಪಂಚಾಯತ್ ಇಒಗಳು ಹಾಗೂ ಸಂಬಂಧಪಟ್ಟ ಎಂಜನಿಯರ್‌ಗಳು ಮಾಹಿತಿ ನೀಡಿ ಮೇ 15 ರವರೆಗೆ ಕುಡಿಯುವ ನೀರು ಪೂರೈಕೆಯಲ್ಲಿ ಯಾವುದೇ ರೀತಿ ಸಮಸ್ಯೆ ಉಂಟಾಗದಂತೆ ಗಮನ ಹರಿಸಲಾಗುವುದು ಎಂದು ಮಾಹಿತಿ ನೀಡಿದರು. ಜಾನುವಾರುಗಳಿಗೆ ಮೇವನ್ನು ಸರಿಯಾಗಿ ಪೂರೈಸಬೇಕು. ಮೇವು ಕೊರತೆಯಾಗದಂತೆ ದಾಸ್ತಾನು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ನಿರ್ದೇಶನ ನೀಡಿದರು. ಜಿ.ಪಂ.ಸಿಇಒ ಎಸ್.ಭರತ್ ಅವರು ಮಾತನಾಡಿ ಕುಡಿಯುವ ನೀರು ಪೂರೈಕೆ ಕಾಮಗಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಯಾವುದೇ ರೀತಿ ಲೋಪ ಉಂಟಾಗದಂತೆ ಎಚ್ಚರ ವಹಿಸಬೇಕು. ಕುಡಿಯುವ ನೀರು ಪೂರೈಕೆಗೆ ಪ್ರಥಮ ಆದ್ಯತೆ ನೀಡಬೇಕು ಎಂದರು. ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ, ಉಪ ವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ಜಿ.ಪಂ.ಉಪ ಕಾರ್ಯದರ್ಶಿ ಸಿ.ಬಿ.ದೇವರಮನಿ, ತಹಶೀಲ್ದಾರರಾದ ಶ್ರೀನಿವಾಸ ಕುಲಕರ್ಣಿ, ತಾ.ಪಂ.ಇ.ಒಗಳು, ನೋಡಲ್ ಅಧಿಕಾರಿಗಳು ಇತರರಿದ್ದರು.

# ಲೋಕಸಭಾ ಚುನಾವಣೆ-2024:ಅಭ್ಯರ್ಥಿಗಳು ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸಿ: ಚುನಾವಣಾ ವೀಕ್ಷಕರಾದ ಜಿ.ಎಸ್.ಪಾಂಡಾ ದಾಸ್

ಬೆಳಗಾವಿ.ಏ.-: ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಅಂತಿಮವಾಗಿ ಕಣದಲ್ಲಿರುವ ಎಲ್ಲ ಅಭ್ಯರ್ಥಿಗಳು ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಸಾಮಾನ್ಯ ವೀಕ್ಷಕರಾಗಿ ನಿಯೋಜಿತರಾದ ಜಿ.ಎಸ್.ಪಾಂಡಾ ದಾಸ್ ಅವರು ಅಭ್ಯರ್ಥಿಗಳಿಗೆ ತಿಳಿಸಿದರು.

ಚಿಕ್ಕೋಡಿ ಉಪ ವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ (ಏ.22) ರಂದು ಜರುಗಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಅಂತಿಮ ಕಣದಲ್ಲಿರುವ ಅಭ್ಯರ್ಥಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಚುನಾವಣಾ ಪ್ರಚಾರಕ್ಕೆ ಬಳಸಲಾಗುವ ವಾಹನಗಳ ಪರವಾನಗೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು. ವಾಹನಗಳ ಪರವಾನಗೆ ಪಡೆಯಲು ಸುವಿಧಾ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಧಾರ್ಮಿಕ ಸ್ಥಳಗಳಲ್ಲಿ ಚುನಾವಣಾ ಪ್ರಚಾರ ಸಭೆಗಳನ್ನು ಆಯೋಜಿಸಬಾರದು. ಒಟ್ಟಾರೆಯಾಗಿ ಅಭ್ಯರ್ಥಿಗಳು ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ನಿಗಾವಹಿಸಬೇಕು. ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ದೂರು, ಸಂದೇಹಗಳಿದ್ದರೆ ತಮ್ಮನ್ನು ಸಂಪರ್ಕಿಸಲು ವೀಕ್ಷಕರಾದ ಜಿ.ಎಸ್.ಪಾಂಡಾ ದಾಸ್ ಅವರು ತಿಳಿಸಿದರು.

ವೆಚ್ಚ ವೀಕ್ಷಕರಾದ ಎನ್. ಮೋಹನಕೃಷ್ಣ ಹಾಗೂ ಅಂಕಿತ ತಿವಾರಿ ಅವರುಗಳು ಮಾತನಾಡಿ ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆ ನಡೆಸುವದು ಮುಖ್ಯವಾಗಿದೆ. ಅಭ್ಯರ್ಥಿಗಳು ದೈನದಂದಿನವಾಗಿ ತಮ್ಮ ಚುನಾವಣಾ ಖರ್ಚು ವೆಚ್ಚಗಳನ್ನು ರಜಿಸ್ಟರನಲ್ಲಿ ದಾಖಲಿಸಬೇಕು. ಈ ಕುರಿತು ಅಭ್ಯರ್ಥಿಗಳಿಗೆ ತರಬೇತಿಯನ್ನು ನೀಡಲಾಗುವುದು ಎಂದರು. ಅಭ್ಯರ್ಥಿಗಳು ಚುನಾವಣಾ ಪ್ರಚಾರ ಅವಧಿಯಲ್ಲಿ ತಮ್ಮ ಚುನಾವಣಾ ಖರ್ಚು-ವೆಚ್ಚಗಳ ಮಾಹಿತಿಯನ್ನು ಕಡ್ಡಾಯವಾಗಿ ಮೂರು ಬಾರಿ ಚುನಾವಣಾ ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕು. ಪ್ರಚಾರ ಸಭೆ, ಪ್ರಚಾರಕ್ಕಾಗಿ ಬಳಸಲಾಗುವ ವಾಹನಗಳ ಅನುಮತಿ ಪಡೆಯುವದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿದರು.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ಮಾತನಾಡಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಅಂತಿಮವಾಗಿ ಕಣದಲ್ಲಿರುವ ಅಭ್ಯರ್ಥಿಗಳಿಗೆ ಚಿಹ್ನೆಗಳನ್ನು ನೀಡಲಾಗಿರುತ್ತದೆ. ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ಸೂಕ್ಷ್ಮ ಹಾಗೂ ಅತೀ ಸೂಕ್ಷ್ಮ ಮತಗಟ್ಟೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಮತಗಟ್ಟೆಗಳ ಕುರಿತು ಅಭ್ಯರ್ಥಿಗಳಲ್ಲಿ ಸಂದೇಹಗಳಿದ್ದಲ್ಲಿ ಅಂತಹ ಮತಗಟ್ಟೆಗಳ ವಿವರಗಳನ್ನು ಒದಗಿಸಿದಲ್ಲಿ ಈ ಕುರಿತು ಪರಿಶೀಲಿಸಿ ಮುಂದಿನ ಅಗತ್ಯದ ಕ್ರಮ ಕೈಗೊಳ್ಳಲಾಗುವದು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ತಿಳಿಸಿದರು.

ಸಭೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಅಂತಿಮವಾಗಿ ಕಣದಲ್ಲಿರುವ ಅಭ್ಯರ್ಥಿಗಳು ಉಪಸ್ಥಿತರಿದ್ದರು.

# ಚಾಯ್ ಪೆ ಚರ್ಚಾ ಮೂಲಕ ಮತಯಾಚಿಸಿದ ಜಗದೀಶ್ ಶೆಟ್ಟರ್



ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಚಾಯ ಪೆ ಚರ್ಚಾ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ರಾಮತೀರ್ಥ ನಗರದಲ್ಲಿ ಮತಯಾಚಿಸಿದರು. ಇಂದು ಬೆಳ್ಳಂ ಬೆಳಗ್ಗೆ ರಾಮತಿರ್ಥ ನಗರದ ವಾರ್ಡ್ ನಂ 46ರ ವ್ಯಾಪ್ತಿಯ ಶಿವಾಲಯ ಗಾರ್ಡನ್ ಹತ್ತಿರ ಹಾಗೂ ಗಣೇಶ್ ಸರ್ಕಲ್ ಹತ್ತಿರ ಚಾಯ್ ಕುಡಿಯುದರ ಮೂಲಕ ಚರ್ಚಿಸಿ ಮತಯಾಚನೆ ಮಾಡಿದರು. ಈ ವೇಳೆ ಸ್ಥಳೀಯರು ಜಗದೀಶ್ ಶೆಟ್ಟರ್ ಅವರಿಗೆ ಮತ ನೀಡಿ ಗೆಲ್ಲಿಸುವದಾಗಿ ಭರವಸೆ ನೀಡಿದ್ದಾರೆ. ಈ ವೇಳೆ ರಾಜ್ಯ ಬಿಜೆಪಿ ಉಪಾಧ್ಯಕ್ಷ ಅನಿಲ್ ಬೆನಕೆ, ವಾರ್ಡ್ ನಂ 46 ರ ಪಾಲಿಕೆ ಸದಸ್ಯ ಹಣಮಂತ ಕೊಂಗಾಲಿ, ಮಹಾನಗರ ಪ್ರಧಾನ ಕಾರ್ಯದರ್ಶಿ ಈರಯ್ಯ ಖೋತ, ಕೆದಾರ್ ಜೋರಾಪುರ್, ವಿಲಾಸ್ ಕೆರೂರ್, ಸಂತೋಷ್ ದೇಸಾಯಿ, ನವೀನ್ ಹಿರೇಮಠ, ಶಶಿ ಬಾಡ್ಕರ್, ಸಚಿನ್ ಮದ್ವಾಲ್, ಸುಧೀರ್, ಬಸವರಾಜ ಯರಗನವಿ, ಸಿ ಎಸ್ ಬಿಡ್ನಾಳ್, ಎಂ.ಟಿ ಪಾಟೀಲ್, ಚನ್ನಗೌಡ ಅಪ್ಪ ಸಾಬ್ ಮತ್ತು ಅಣ್ಣಸಾಬ ಜೈನ್ ರಾಜೇಂದ್ರ ಹಲಗಿ, ಡಾ. ಬಿದ್ರಿ, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮೇ.20 ರಿಂದ 25 ರವರೆಗೆ ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ

ಬೆಳಗಾವಿ.ಏ.-: ಧಾರವಾಡದ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ, ಬೆಳಗಾವಿ ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಗೂ ಬೆಳಗಾವಿ ಜಿಲ್ಲೆಯ ಕೆ.ಎಲ್.ಎಸ್. ಇನಸ್ಟಿಟ್ಯೂಟ್ ಆಫ್ ಮ್ಯಾನೆಜಮೆಂಟ್ ಎಜುಕೇಶನ್ & ರಿಸರ್ಚ್ ಇವುಗಳ ಸಯುಕ್ತ ಆಶ್ರಯದಲ್ಲಿ ರಫ್ತು ಅರಿವು ಮೂಡಿಸಲು "ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ ಮೇ.20 ರಿಂದ 25 ರವರೆಗೆ ಕೆ.ಎಲ್.ಎಸ್. ಇನಸ್ಟಿಟ್ಯೂಟ್ ಆಫ್ ಮ್ಯಾನೆಜಮೆಂಟ್ ಎಜುಕೇಶನ್ & ರಿಸರ್ಚ್ (ಖಐಒಇಖ) ಕಚೇರಿಯಲ್ಲಿ ಆಯೋಜಿಸಲು ನಿರ್ಧರಿಸಲಾಗಿದೆ.

6 ದಿನಗಳ ಈ ತರಬೇತಿ ಕಾರ್ಯಕ್ರಮವು ಅಂತರಾಷ್ಟ್ರೀಯ ವ್ಯವಹಾರದ ಮಾಹಿತಿಯನ್ನು ನೀಡುವ ಉದ್ದೇಶವನ್ನು ಹೊಂದಿರುತ್ತದೆ. ಈ ತರಬೇತಿಯಲ್ಲಿ ರಫ್ತು ವ್ಯವಹಾರಕ್ಕೆ ಸಂಬಂಧಿಸಿದಂತೆ ಸಂಪೂರ್ಣ ಹಾಗೂ ಸಮಗ್ರ ಮಾಹಿತಿಯನ್ನು ನೀಡಲಾಗುವುದು. ರಫ್ತು ಅಂದರೇನು? ಏಕೆ? ಎಲ್ಲಿಗೆ? ಹಾಗೂ ಹೇಗೆ ಮಾಡಬೇಕೆಂಬುದರ ಬಗ್ಗೆ, ರಫ್ತಿಗೆ ಸಂಬಂಧಿಸಿದಂತೆ ನಿಯಮಾವಳಿಗಳು, ಅಂತರಾಷ್ಟ್ರೀಯ ರಫ್ತು ವ್ಯಾಪಾರ, ರಫ್ತು ಮಾರುಕಟ್ಟೆ, ರಫ್ತಿಗೆ ಸಂಬಂಧಿತ ಕೇಂದ್ರ ಸರ್ಕಾರದ ಸಂಸ್ಥೆಗಳಾದ ಡಿ.ಜಿ.ಎಫ್.ಟಿ., ಕಸ್ಟಮ್ಸ್, ಆರ್.ಬಿ.ಐ. ಹಾಗೂ ರಫ್ತು ಉತ್ತೇಜನ ಕೌನ್ಸಲ್‌ಗಳಾದ ಅಪೇಡಾ, ಫಿಯೋ ಇತ್ಯಾದಿ, ರಫ್ತು ಪ್ಯಾಕೇಜಿಂಗ್, ಹಣಕಾಸು, ವಿದೇಶಿ ವಿನಮಯ, ಇ.ಸಿ.ಜಿ.ಸಿ., ಇ-ವಾಣಿಜ್ಯ ವೇದಿಕೆ ಹಾಗೂ ಜಿ.ಎಸ್.ಟಿ. ನಿಯಮಗಳ ಕುರಿತಾಗಿಯೂ ವಿಷಯ ಮಂಡನೆ ಮಾಡಲಾಗುವುದು. ಉತ್ತರ ಕರ್ನಾಟಕದ ರಫ್ತು ಸಾಧ್ಯತಾ ಉತ್ಪನ್ನಗಳ ಕುರಿತು ಮಾಹಿತಿಯನ್ನು ಹಾಗೂ ಆಯಾ ಕ್ಷೇತ್ರಗಳಲ್ಲಿ ಸಾಕಷ್ಟು ಅನುಭವ ಹೊಂದಿರುವ ಅಥವಾ ಸೇವೆ ಸಲ್ಲಿಸುತ್ತಿರುವ ಪರಿಣಿತಿದಾರರು ಅತಿಥಿ ಉಪನ್ಯಾಸಕರಾಗಿ ಪಾಲ್ಗೊಂಡು ಮಾಹಿತಿ ನೀಡುವರು.ಆಸಕ್ತಿಯುಳ್ಳವರೆಲ್ಲರೂ ಏ.30 ಒಳಗಾಗಿ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ಜಾಲತಾಣ: www.vtpc.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿ ಶುಲ್ಕ ರೂ. 3,540/- (ಜಿ.ಎಸ್.ಟಿ. ಸೇರಿ) ಇದ್ದು, ನೋಂದಾಯಿಸಿಕೊಳ್ಳಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಧಾರವಾಡ ಜಿಲ್ಲೆಯ ರಾಯಾಪುರದ ವಿಶ್ವೇಶ್ವರಯ್ಯಾ ವ್ಯಾಪಾರ ಉತ್ತೇಜನ ಕೇಂದ್ರ ಜಂಟಿ ನಿರ್ದೇಶಕರಿಗೆ, ಜಿಲ್ಲೆಗಳ ಅಭ್ಯರ್ಥಿಗಳು ಆಯಾ ಜಿಲ್ಲೆಯ ಜಿಲ್ಲಾ ಕೈಗಾರಿಕಾ ಕೇಂದ್ರ ಕಚೇರಿಗಳನ್ನು ಸಂಪರ್ಕಿಸಬಹುದು. ಮೋಬೈಲ್ ಸಂಖ್ಯೆ: 8073707446 (ಟಿ.ಎಸ್. ಮಲ್ಲಿಕಾರ್ಜುನ) 9742709229 (ವಿಶ್ವನಾಥ ಸೂಸಿಮಠ) ಗೆ ಸಂಪರ್ಕಿಸಬಹುದು ಎಂದು ಧಾರವಾಡದ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳೂಟಗಿ ಗ್ರಾಮದಲ್ಲಿ ನರೇಗಾ ಕೂಲಿಕಾರ್ಮಿಕರಿಗೆ ಮತದಾನ ಜಾಗೃತಿ ಮೇ 7 ರಂದು ಎಲ್ಲರೂ ಮತದಾನ ಮಾಡಲು ಕರೆ

ಕೊಪ್ಪಳ, ಏಪ್ರಿಲ್: ಇಂದು ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ಬಳೂಟಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಜಿಲ್ಲಾ, ಹಾಗೂ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಸ್ವೀಪ್ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು.ಈ ವೇಳೆ ತಾಲೂಕು ಐಇಸಿ ಸಂಯೋಜಕರು ಮಾತನಾಡಿ, 2024 ರ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಬಳೂಟಗಿ ಗ್ರಾಮದ ನರೇಗಾ ಕೂಲಿಕಾರರು ಮೇ 7 ರಂದು ನಡೆಯುವ ಮತದಾನದಂದು ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಹೇಳಿದರು.ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನ ಮಾಡುವುದು ಸಂವಿಧಾನ ಕೊಟ್ಟಿರುವ ಹಕ್ಕಾಗಿದೆ. ಅದನ್ನು ನಾವು ಚಲಾಯಿಸಬೇಕು. ಅದರಿಂದ ವಂಚಿತರಾಗಬಾರದು. ಶೇಕಡಾ 100 ರಷ್ಟು ಮತದಾನ ಆಗಬೇಕು ಎಂದರು.ಗ್ರಾಮ ಪಂಚಾಯತಿ ಪಿಡಿಒ ಎಂ.ಡಿ.ಫಯಾಜ್ ಮಾತನಾಡಿ, 2024-25 ನೇ ಸಾಲಿನಲ್ಲಿ ನರೇಗಾ ಯೋಜನೆಯಡಿ ಸಾಮೂಹಿಕ ಕೆಲಸ ಆರಂಭಿಸಲಾಗಿದೆ. ಇದರಲ್ಲಿ ಎಲ್ಲರೂ ಪಾಲ್ಗೊಳ್ಳಬೇಕು. ಈ ಬಾರಿ ಎಲ್ಲರೂ 100 ಮಾನವ ದಿನಗಳನ್ನು ಸದುಪಯೋಗ ಪಡೆಯಬೇಕು. ತಮಗೆ ಯೋಜನೆಯ ಬಗ್ಗೆ ಏನಾದರೂ ಸಮಸ್ಯೆಗಳು ಇದ್ದರೆ ನರೇಗಾ ಯೋಜನೆಯ ಏಕೀಕೃತ ಸಹಾಯವಾಣಿ 8277506000 ಗೆ ದೂರು ಅಥವಾ ಕೆಲಸದ ಬೇಡಿಕೆಗಾಗಿ ಕರೆ ಮಾಡಬಹುದು ಎಂದು ಸಲಹೆ ನೀಡಿದರು.ಗ್ರಾಮ ಪಂಚಾಯತಿ ಡಿಇಒ ಮಹೇಶ ಮಾತನಾಡಿ, ನರೇಗಾದಡಿ ಎನ್‌ಎಂಆರ್ ತೆಗೆಸುವ ಮೊದಲು ತಮ್ಮ ಜಾಬ್‌ಕಾರ್ಡ್‌ಗೆ ಬ್ಯಾಂಕ್ ಪಾಸ್‌ಬುಕ್ ಲಿಂಕ್ ಆಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. ಯಾವುದೇ ರೀತಿಯ ಸಮಸ್ಯೆ ಇದ್ದರೆ ಬ್ಯಾಂಕ್‌ಗೆ ಹೋಗಿ ಸರಿಪಡಿಸಿಕೊಳ್ಳಬೇಕು ಎಂದರು.ಕಾಮಗಾರಿ ಸ್ಥಳದಲ್ಲಿ 200 ಕ್ಕೂ ಹೆಚ್ಚು ಅಕುಶಲ ಕೂಲಿಕಾರರಿಂದ ಮತದಾನದ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು. ಈ ವೇಳೆ ಬಿಎಫ್‌ಟಿ ಶರೀಫ್, ಕಾಯಕ ಮಿತ್ರರಾದ ವಿದ್ಯಾ ಗಾಣಿಗೇರ, ಕಾಯಕ ಬಂಧುಗಳು, ಅಕುಶಲ ಕೂಲಿಕಾರರು ಹಾಜರಿದ್ದರು.